**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 150 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 16-07-2019. |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪಿ.ಯು. ಕಾಲೇಜಿನಲ್ಲಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು: (ತಾಲ್ಲೂಕುವಾರು ಮಾಹಿತಿ ನೀಡುವುದು) | 2018-19ನೇ ವರ್ಷದಲ್ಲಿ 2997 ಅತಿಥಿ ಉಪನ್ಯಾಸಕರು ಕೆಲಸ ನಿರ್ವಹಿಸಿದ್ದರು, 2019-2020ನೇ ವರ್ಷದಲ್ಲಿ ರಾಜ್ಯದ ವಿವಿಧ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳೆದುರಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಲು ಅನುಮೋದನೆಗಾಗಿ ಕಡತ ಚಾಲನೆಯಲ್ಲಿದೆ. |
| ಆ) | ಅತಿಥಿ ಉಪನ್ಯಾಸಕರುಗಳಲ್ಲಿ ಹೆಚ್ಚಿನವರು ಗ್ರಾಮೀಣ ಭಾಗದವರಾಗಿರುವುದರಿಂದ ಮಾನವೀಯತೆಯ ದೃಷ್ಟಿಯಿಂದ ಇವರುಗಳ ಹುದ್ದೆಯನ್ನು ಖಾಯಂ ಮಾಡಲು ಸರ್ಕಾರದ ಕ್ರಮಗಳೇನು: | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಅವಕಾಶ ಇರುವುದಿಲ್ಲ. ಮುಂದುವರೆದು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಉಪನ್ಯಾಸಕರ ಹುದ್ದೆಗಳನ್ನು 75:25 ರ ಅನುಪಾತದಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ಮೂಲಕ ನೇರ ನೇಮಕಾತಿ ಮೂಲಕ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡುವ ಮೂಲಕ ತುಂಬಲು ಅವಕಾಶವಿದ್ದು ಅತಿಥಿ ಉಪನ್ಯಾಸಕರನ್ನು ಖಾಯಂ ಗೊಳಿಸಲು ಅವಕಾಶವಿರುವುದಿಲ್ಲ. |
| ಇ) | ಅತಿಥಿ ಉಪನ್ಯಾಸಕರುಗಳಿಗೆ ಕೊಡುತ್ತಿರುವ ವೇತನವನ್ನು ದ್ವಿಗುಣಗೊಳಿಸಲು ಸರ್ಕಾರಕ್ಕಿರುವ ತೊಂದರೆಯೇನು? (ಪೂರ್ಣ ಮಾಹಿತಿ ಒದಗಿಸುವುದು) | ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |

**ಸಂಖ್ಯೆ: ಇಡಿ 118 ಡಿಜಿಡಬ್ಲ್ಯೂ 2019**

(ಎಸ್.ಆರ್.ಶ್ರೀನಿವಾಸ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.